# All India Radio: Bangalore
# Regional Bulletin In Kannada
# 29.1.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

29.1.2025 / 2.30 p.m.

<><><><>

ಮುಖ್ಯಾಂಶಗಳು

1. ತಮ್ಮಿಬ್ಬರ ನಡುವೆ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ : ಜಂಟಿ ಸುದ್ದಿಗೋಷ್ಠಿಯಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಘೋಷಣೆ
2. ನಾಯಕತ್ವ ವಿಚಾರದಲ್ಲಿ ಗೊಂದಲ ಹಿನ್ನೆಲೆ ; ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯ ಕುಂಠಿತ ; ಬಿಜೆಪಿ ಆರೋಪ
3. ಬೆಳಗಾವಿ ಅಧಿವೇಶನ ಹಿನ್ನೆಲೆ ; ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ನೇತೃತ್ವದಲ್ಲಿ ಬಿಜೆಪಿ-ಜೆಡಿಎಸ್ ಸಮನ್ವಯ ಸಭೆ
4. ತುಂಗಭದ್ರಾ ಅಚ್ಚುಕಟ್ಟು ಪ್ರದೇಶಕ್ಕೆ ೨ನೇ ಬೆಳೆಗೆ ನೀರು ಒದಗಿಸುವಂತೆ ರೈತರಿಂದ ಪ್ರತಿಭಟನೆ

<><><><>

ಪಕ್ಷದ ಹೈಕಮಾಂಡ್ ಸೂಚನೆಯಂತೆ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರ ಜೊತೆ ಉಪಹಾರ ಸಭೆ ನಡೆಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ತಮ್ಮ ನಿವಾಸದಲ್ಲಿ ಉಪಹಾರ ಸಭೆ ಬಳಿಕ ಜಂಟಿ ಸುದ್ದಿಗೋಷ್ಠಿ ನಡೆಸಿ, ಮಾತನಾಡಿದ ಅವರು, ತಮ್ಮಿಬ್ಬರ ನಡುವೆ ಯಾವುದೇ ಗೊಂದಲಗಳಿಲ್ಲ ಎಂದು ಘೋಷಣೆ ಮಾಡಿದ್ದಾರೆ. ಗೊಂದಲ ತಿಳಿ ಮಾಡುವಂತೆ ಹೈಕಮಾಂಡ್ ಸೂಚಿಸಿದ್ದು, ನಾಳೆಯಿಂದ ಯಾವುದೇ ಗೊಂದಲ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ**

ಇದೇ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಜಕೀಯವಾಗಿ ತಮ್ಮಿಬ್ಬರದ್ದು, ಒಂದೇ ತೀರ್ಮಾನ ಎಂದು ತಿಳಿಸಿದ್ದಾರೆ. ಪಕ್ಷದ ರಾಜ್ಯ ಘಟಕದಲ್ಲಿ ಯಾವುದೇ ಬಣಗಳಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ೨೦೨೮ರಲ್ಲಿ ಮತ್ತೆ ಪಕ್ಷವನ್ನು ಅಧಿಕಾರಕ್ಕೆ ತರುವುದೇ ಪಕ್ಷದ ಗುರಿ ಎಂದು ತಿಳಿಸಿದ್ದಾರೆ. ಹೈಕಮಾಂಡ್ ಆಹ್ವಾನಿಸಿದರೇ ಉಭಯ ನಾಯಕರು ದೆಹಲಿಗೆ ತೆರಳುವುದಾಗಿ ಹೇಳಿದ್ದಾರೆ.

**ಧ್ವನಿ : ಡಿ.ಕೆ. ಶಿವಕುಮಾರ್**

<><><><>

ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಹುದ್ದೆ ಕುರಿತು ಮೂಡಿರುವ ಭಿನ್ನಾಭಿಪ್ರಾಯ ಬಗೆಹರಿಸಿಕೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವಿನ ಸಭೆಯನ್ನು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ ಟೀಕಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿಕಾರ ಹಂಚಿಕೆಯ ವಿಚಾರವನ್ನು ಬಹಿರಂಗ ಪಡಿಸುವಂತೆ ಒತ್ತಾಯಿಸಿದ್ದಾರೆ. ಕಾಂಗ್ರೆಸ್ ವರಿಷ್ಠರು ದುರ್ಬಲಗೊಂಡಿರುವುದರಿಂದ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಅವರು ಅದರ ಲಾಭವನ್ನು ಪಡೆದುಕೊಳ್ಳುತ್ತಿದ್ದಾರೆ. ಉಭಯ ನಾಯಕರ ನಡುವಿನ ಭಿನ್ನಾಭಿಪ್ರಾಯದಿಂದಾಗಿ ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯ ಕುಂಠಿತಗೊಂಡಿದೆ ಎಂದು ದೂರಿದ್ದಾರೆ. ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ಬಿಡುಗಡೆಯಾಗುತ್ತಿಲ್ಲ ಎಂದು ಆರೋಪಿಸಿದ್ದಾರೆ.

<><><><>

ಡಿಸೆಂಬರ್ ೮ ರಿಂದ ಬೆಳಗಾವಿಯಲ್ಲಿ ವಿಧಾನಮಂಡಲದ ಅಧಿವೇಶನ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಇಂದು ಬೆಂಗಳೂರಿನಲ್ಲಿ ಕೇಂದ್ರ ಸಚಿವ ಹಾಗೂ ಜೆಡಿಎಸ್

ರಾಜ್ಯಾಧ್ಯಕ್ಷ ಹೆಚ್.ಡಿ.ಕುಮಾರಸ್ವಾಮಿ ನೇತೃತ್ವದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಸಮನ್ವಯ ಸಭೆ ನಡೆಯಿತು. ಉತ್ತರ ಕರ್ನಾಟಕ ಭಾಗದ ಚರ್ಚೆಗೆ ಮೊದಲ ಆದ್ಯತೆ ನೀಡಬೇಕು ಎಂಬುದರ ಕುರಿತು ಸರ್ಕಾರವನ್ನು ಒತ್ತಾಯಿಸಲು ನಿರ್ಣಯಿಸಲಾಯಿತು. ಅಲ್ಲದೇ ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಸದನದಲ್ಲಿ ಪ್ರಸ್ತಾಪಿಸಲು ನಾಯಕರು ತೀರ್ಮಾನಿಸಿದ್ದಾರೆ. ಅಧಿವೇಶನದ ಕೊನೆಯ ದಿನಗಳಲ್ಲಿ ಚರ್ಚೆಗೆ ಅವಕಾಶ ನೀಡದೇ ಈ ಬಾರಿ ಅಧಿವೇಶನದ ಪ್ರಾರಂಭದಲ್ಲೇ ಅವಕಾಶ ನೀಡಬೇಕು ಎಂದು ನಾಯಕರು ಒತ್ತಾಯಿಸಿದ್ದಾರೆ. ಮೆಕ್ಕೆಜೋಳ ಬೆಳೆಗಾರರ ಸಮಸ್ಯೆ ಕುರಿತು ಪ್ರಸ್ತಾಪಿಸಲು ಸಭೆಯಲ್ಲಿ ನಿರ್ಣಯಿಸಲಾಗಿದೆ. ಕಾಂಗ್ರೆಸ್ ಸರ್ಕಾರವು ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡುತ್ತಿದೆ. ಇದರಿಂದ ಖಾತರಿ ಯೋಜನೆಗೆ ಹಣ ಬಳಸಿಕೊಳ್ಳುವ ಹುನ್ನಾರವಾಗಿದೆ ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು. ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ.ಸುರೇಶ್‌ಬಾಬು ಮಾಜಿ ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥ್ ನಾರಾಯಣ್, ಶಾಸಕ ಎಸ್. ಆರ್. ವಿಶ್ವನಾಥ್, ಮಾಜಿ ಸಚಿವ ಹೆಚ್.ಡಿ.ರೇವಣ್ಣ ಸಭೆಯಲ್ಲಿ ಭಾಗವಹಿಸಿದ್ದರು.

<><><><>

ತುಂಗಭದ್ರಾ ಅಚ್ಚುಕಟ್ಟು ಪ್ರದೇಶಕ್ಕೆ ಎರಡನೇ ಬೆಳೆಗೆ ನೀರು ಇಲ್ಲವೇ ಪರಿಹಾರ ನೀಡುವಂತೆ ಆಗ್ರಹಿಸಿ ಬಳ್ಳಾರಿ ನಗರದಲ್ಲಿ ನಿನ್ನೆ ಬಿಜೆಪಿ ಪ್ರತಿಭಟನೆ ನಡೆಸಿತು. ಎತ್ತಿನ ಗಾಡಿಯಲ್ಲಿ ಗಡಿಗಿ ಚೆನ್ನಪ್ಪ ಸರ್ಕಲ್‌ಗೆ ಆಗಮಿಸಿದ ಬಿಜೆಪಿ ಮುಖಂಡರು. ಮಾನವ ಸರಪಳಿ ಮೂಲಕ ಸರ್ಕಲ್ ತಡೆ ನಡೆಸಿದರು. ನೀರು ಇಲ್ಲವೇ ಪ್ರತಿ ಎಕರೆಗೆ ೨೫ ಸಾವಿರ ರೂಪಾಯಿ ಪರಿಹಾರ ನೀಡಿ ಎಂದು ಘೋಷಣೆ ಕೂಗಿದರು. ವಿಧಾನ

ಪರಿಷತ್ತಿನ ಸದಸ್ಯ ಎನ್. ರವಿಕುಮಾರ್ ಮಾತನಾಡಿ, ಕುರ್ಚಿ ಕಿತ್ತಾಟ ಬಿಡಿ ರೈತರ ಸಮಸ್ಯೆ ಕಡೆಗೆ ಗಮನ ಕೊಡಿ ಎಂದು ಆಗ್ರಹಿಸಿದರು. ಮುಂಗಾರಿನಲ್ಲಿ ಬೆಳೆದ ಮೆಕ್ಕೆಜೋಳಕ್ಕೆ ಒಂದು ಕಡೆ ಬೆಲೆ ಕುಸಿದಿದೆ. ಮತ್ತೊಂದು ಕಡೆ ಜಲಾಶಯದಿಂದ ನೀರು ಬಿಡದೇ ಬೇಸಿಗೆ ಅವಧಿಯ  ಭತ್ತ ಬೆಳಯಲು  ನೀರಿಲ್ಲದೆ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ಆರೋಪಿಸಿದರು. ಈ ವೇಳೆ ಸಾರ್ವಜನಿಕರಿಗೆ ತೊಂದರೆ ನೀಡಿದ ಹಿನ್ನೆಲೆಯಲ್ಲಿ ಪೊಲೀಸರು ರವಿಕುಮಾರ್, ಅನಿಲ್ ನಾಯ್ಡು, ಸೋಮಶೇಖರ ರೆಡ್ಡಿ ಮೊದಲಾದವರನ್ನು ಬಂಧಿಸಿ ಬಳಿಕ ಬಿಡುಗಡೆ ಮಾಡಿದರು.

<><><><>

ಗ್ರಾಮ ಪಂಚಾಯಿತಿ ವ್ಯಾಪ್ತಿಯ ವ್ಯಾಪಾರ ವಹಿವಾಟು, ಸೇವೆಗಳು, ಚರ ಮತ್ತು ಸ್ಥಿರ ಆಸ್ತಿಗಳ ಮೇಲೆ ವಿಧಿಸುವ ಶುಲ್ಕ ಹಾಗೂ ಕರ ವಸೂಲಿಗೆ ಯಾದಗಿರಿ ಜಿಲ್ಲಾ ಪಂಚಾಯಿತಿ ನವೆಂಬರ್ ೨೬ರಂದು ನಡೆಸಿದ ಒಂದು ದಿನದ ಕರ ವಸೂಲಿ ವಿಶೇಷ ಅಭಿಯಾನದಿಂದ ೨ ಕೋಟಿ ೬೮ ಲಕ್ಷ ರೂಪಾಯಿ ಜಮೆಯಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ತಿಳಿಸಿದ್ದಾರೆ. ಜಿಲ್ಲಾ ಪಂಚಾಯಿತಿಯು ಆಗಸ್ಟ್ ೧೨ರಂದು ಕರವಸೂಲಾತಿಗೆ ಒಂದೇ ದಿನದಲ್ಲಿ ಕೋಟಿ ಅಭಿಯಾನ ಹಮ್ಮಿಕೊಂಡಿತ್ತು. ಆಗ, ೧ ಕೋಟಿ ೪೬ ಲಕ್ಷ ರೂಪಾಯಿ ತೆರಿಗೆ ಸಂಗ್ರಹವಾಗಿತ್ತು. ಜಿಲ್ಲೆಯಲ್ಲಿ ೧೨೨ ಗ್ರಾಮ ಪಂಚಾಯಿತಿಗಳಿದ್ದು, ಒಂದೊಂದು ಗ್ರಾಮ ಪಂಚಾಯಿತಿಗೆ ಕನಿಷ್ಠ ತಲಾ ೨ ಲಕ್ಷ ರೂಪಾಯಿ ಸಂಗ್ರಹಿಸುವ ಗುರಿ ನೀಡಲಾಗಿತ್ತು. ನಾಲ್ಕೈದು ವರ್ಷಗಳಿಂದ ಕರ ಕಟ್ಟದೆ ೫ ಸಾವಿರದಿಂದ ೧೦ ಸಾವಿರ ರೂಪಾಯಿವರೆಗೆ ಬಾಕಿ ಉಳಿಸಿಕೊಂಡವರ ಪಟ್ಟಿ ಮಾಡಿತ್ತು. ಅಭಿಯಾನಕ್ಕೂ ಮುನ್ನವೇ ಅವರ ಮನೆ-ಮನೆಗೆ ಭೇಟಿ ನೀಡಿ ಕರ ಪಾವತಿಗೆ ಮನವೊಲಿಸಲಾಗಿತ್ತು.

ಈ ಹಿನ್ನೆಲೆಯಲ್ಲಿ ಕರ ವಸೂಲಿ ಅಭಿಯಾನಕ್ಕೆ ಸಾರ್ವಜನಿಕರಿಂದ ಅಭೂತಪೂರ್ವ ಬೆಂಬಲ ವ್ಯಕ್ತವಾಗಿದೆ.

<><><><>

ಚಿಕ್ಕಬಳ್ಳಾಪುರ-ಗೌರಿಬಿದನೂರು ಮಾರ್ಗದ ತಿಪ್ಪೇನಹಳ್ಳಿ ಗ್ರಾಮಕ್ಕೆ ಹೊಂದಿಕೊಂಡಿರುವ ಬೆಟ್ಟದ ಬಳಿ ಇಂದು ಬೆಳಗ್ಗೆ ಚಿರತೆ ಪ್ರತ್ಯಕ್ಷವಾಗಿದ್ದು, ಸುತ್ತಮುತ್ತಲ ಗ್ರಾಮಸ್ಥರು ಆತಂಕಗೊಂಡಿದ್ದಾರೆ. ಇತ್ತೀಚಿಗೆ ಈ ಭಾಗದ ಬೆಟ್ಟಗುಡ್ಡಗಳ ಪ್ರದೇಶಗಳಿಗೆ ಹೊಂದಿಕೊಂಡಿರುವ ಗ್ರಾಮಗಳ ಕಡೆ ಚಿರತೆಗಳು ಕಾಣಿಸಿಕೊಳ್ಳುತ್ತಿವೆ. ಅರಣ್ಯ ಇಲಾಖೆ ಕೂಡಲೇ ಚಿರತೆಗಳನ್ನು ಸೆರೆ ಹಿಡಿಯಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

<><><><>

ಡಿಸೆಂಬರ್ ಮೂರನೇ ವಾರದಲ್ಲಿ ಮಂಡ್ಯ ಜಿಲ್ಲೆಯ ಮಳವಳ್ಳಿ ಪಟ್ಟಣದಲ್ಲಿ ನಡೆಯಲಿರುವ ಸುತ್ತೂರು ಶಿವರಾತ್ರೀಶ್ವರ ಶಿವಯೋಗಿಗಳ ೧ ಸಾವಿರದ ೬೬ನೇ ಜಯಂತಿ ಕಾರ್ಯಕ್ರಮಕ್ಕೆ ರಾಷ್ಟ್ರಪತಿ ದ್ರೌಪತಿ ಮುರ್ಮು ಆಗಮಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ವೇದಿಕೆ ಸ್ಥಳ, ಹೆಲಿಪ್ಯಾಡ್ ಸೇರಿದಂತೆ ಇತರೆ ಸ್ಥಳಗಳನ್ನು ಕನಕಪುರ ದೇಗುಲ ಮಠದ ಕಿರಿಯ ಸ್ವಾಮೀಜಿ ಚನ್ನಬಸವ ಸ್ವಾಮಿ, ಶಾಸಕ ಪಿ.ಎಂ ನರೇಂದ್ರಸ್ವಾಮಿ, ಜಿಲ್ಲಾಧಿಕಾರಿ ಡಾ.ಕುಮಾರ, ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಪರಿಶೀಲನೆ ನಡೆಸಿ ಚರ್ಚೆ ನಡೆಸಿದರು. ಮಳವಳ್ಳಿ ಪಟ್ಟಣದ ಶಾಂತಿ ಕಾಲೇಜು ಮುಂಭಾಗ ಪುರಸಭೆಗೆ ಸೇರಿದ ೩೩ ಎಕರೆ ಪ್ರದೇಶದಲ್ಲಿ ಶಿವಯೋಗಿಗಳ ಜಯಂತಿ ಕಾರ್ಯಕ್ರಮದ ವೇದಿಕೆ ನಿರ್ಮಾಣ, ದಾಸೋಹ, ಕುಡಿಯುವ ನೀರಿನ ಸೌಲಭ್ಯ, ಹಾಸನಗಳ ವ್ಯವಸ್ಥೆ ಸೇರಿದಂತೆ ಇತರೆ ವಿಷಯಗಳ ಬಗ್ಗೆ ಚರ್ಚೆ ನಡೆಸಿ ಹಲವು ತೀರ್ಮಾನಗಳನ್ನು ಕೈಗೊಳ್ಳಲಾಗಿದೆ. ರಾಷ್ಟ್ರಪತಿಗಳು ಆಗಮಿಸುವ ಹಿನ್ನೆಲೆಯಲ್ಲಿ

ಹೆಲಿಪ್ಯಾಡ್ ನಿರ್ಮಾಣಕ್ಕೆ ಮಳವಳ್ಳಿ ತಾಲೂಕಿನ ಮೈಸೂರು ರಸ್ತೆಯ ಮೂಗನ ಕೊಪ್ಪಲು ಬಳಿ, ಕೊಳ್ಳೇಗಾಲ ರಸ್ತೆಯ ನಾಗೇಗೌಡನ ದೊಡ್ಡಿ, ಕುಂದೂರು ವ್ಯಾಪ್ತಿಯ ಪ್ರದೇಶಗಳನ್ನು ಪರಿಶೀಲನೆ ನಡೆಸಲಾಯಿತು.

<><><><>

ಮಾದಕ ವ್ಯಸನವು ಸಮಾಜದ ಒಂದು ಪಿಡುಗಾಗಿ ಪರಿಣಮಿಸಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಮಾದಕ ವಸ್ತು ನಿಯಂತ್ರಣ ಕುರಿತು ಅರಿವು ಹಾಗೂ ತರಬೇತಿ ಕಾರ್ಯಾಗಾರ ಉದ್ದೇಶಿಸಿ ಮಾತನಾಡಿದ ಅವರು, ಮಾದಕ ವಸ್ತುಗಳ ವ್ಯಸನ ಮುಕ್ತ ಸಮಾಜ ನಿರ್ಮಾಣ ನಮ್ಮೆಲ್ಲರ ಗುರಿ ಆಗಬೇಕಿದ್ದು, ಈ ಕುರಿತು ಯುವ ಸಮೂಹಕ್ಕೆ ಜಾಗೃತಿ ಮೂಡಿಸಬೇಕಿದೆ ಎಂದು ಕರೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>